## 27. ಬಿ.ಎಸ್.ವೈ ಭದ್ರ

ರಾಜ್ಯ ಬಿಜೆಪಿ ಸರ್ಕಾರದ ವಿರುದ್ಧ ಪ್ರತಿಪಕ್ಷ ಕಾಂಗ್ರೆಸ್ ಮಂಡಿಸಿದ್ದ ಅವಿಶ್ವಾಸ ನಿರ್ಣಯ ಪ್ರಸ್ತಾಪ ಧ್ವನಿಮತದಿಂದ ತಿರಸ್ಕರಿಸಲ್ಪಟ್ಟಿತು. ಈ ಮೂಲಕ ಮುಖ್ಯಮಂತ್ರಿ ಯಡಿಯೂರಪ್ಪ ವಿಧಾನ ಸಭೆಯಲ್ಲಿ ವಿಶ್ವಾಸ ಗೆದ್ದಂತಾಗಿದೆ.

ಸುಮಾರು ಐದು ಗಂಟೆಗಳ ಕಾಲ ನಡೆದ ಚರ್ಚೆಯ ನಂತರ ನಿರ್ಣಯವನ್ನು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಧ್ವನಿಮತಕ್ಕೆ ಹಾಕಿದರು. ಬಳಿಕ ನಿರ್ಣಯ ತಿರಸ್ಕರಿಸಲ್ಪಟ್ಟಿದೆ ಎಂದು ಘೋಷಿಸಿದರು.

ಚರ್ಚೆಯ ನಂತರ ಮಾತನಾಡಿದ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹಗರಣ ಆರೋಪಕ್ಕೆ ಸಂಬಂಧಿಸಿದಂತೆ ಸತ್ಯಾಂಶ ಸಾಬೀತು ಮಾಡುವ ಜವಾಬ್ದಾರಿ ನಿಮ್ಮ ಮೇಲಿದೆ. ಇದರ ವಿರುದ್ಧ ಸಿಬಿಐಗಾದ್ರೂ ಹೋಗಿ ಲೋಕಾಯುಕ್ತಕ್ಕಾದರೂ ಹೋಗಿ ಎಂದು ಹೇಳಿದ್ದಾರೆ.

ಅವಿಶ್ವಾಸ ನಿರ್ಣಯದ ಮೇಲಿನ ಚರ್ಚೆಗೆ ಉತ್ತರಿಸಿದ ಅವರು ಹಗರಣದಲ್ಲಿ ನಮ್ಮ ಕುಟುಂಬದವರ ಪಾತ್ರ ಇದ್ದರೆ ನಾನು ರಾಜಕೀಯದಿಂದ ನಿವೃತ್ತಿಯಾಗುತ್ತೇನೆ ಎಂದು ಸವಾಲು ಹಾಕಿದರು. ಅವಿಶ್ವಾಸ ನಿರ್ಣಯದ ಮೇಲೆ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಮಾತನಾಡಿದ್ದಾರೆ. ಎಲ್ಲ ಆರೋಪಗಳು ನೂರಕ್ಕೆ ನೂರರಷ್ಟು ಸತ್ಯಕ್ಕೆ ದೂರ ಎಂದು ಹೇಳಿದರು.

ಮುಂಬರುವ ಉಪ ಚುನಾವಣೆಯಲ್ಲಿ ಜನರ ಮುಂದೆ ಆರೋಪ ಮಾಡಿ ಅಲ್ಲಿ ಜನರು ಎನು ತೀರ್ಮಾನ ಕೊಡುತ್ತಾರೋ ನೋಡೋಣ. ಮುಂದಿನ ಚುನಾವಣೆಯಲ್ಲಿ 135 ಸ್ಥಾನ ಗೆಲ್ಲಿಸಿಕೊಡುವ ಜವಾಬ್ದಾರಿ ನನ್ನದು. ಇನ್ನೂ 10 ವರ್ಷ ಕಾಂಗ್ರೆಸ್ ಪ್ರತಿಪಕ್ಷದಲ್ಲಿಯೇ ಕೂಡುವಂತಾಗುತ್ತದೆ ಎಂದು ತಿಳಿಸಿದರು.

ಆರ್ಥಿಕ ಪರಿಸ್ಥಿತಿ ಹದಗೆಟ್ಟಿರುವುದು ದುರ್ದೈವ. ಅದಕ್ಕೆ ಸಾಕಷ್ಟು ಕಾರಣಗಳು ಇವೆ. ಆದರೂ ಕಳೆದ ಒಂದು ವರ್ಷದಲ್ಲಿ ರಾಜ್ಯದ ಅಭಿವೃದ್ದಿಗೆ ಸಾಕಷ್ಟು ಕಾರ್ಯಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಆಧಾರ:ಉದಯವಾಣಿ, ದಿನಾಂಕ:27.09.2020